ಅಧ್ಯಕ್ಷರು: ಈಗ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳನ್ನು ಮಂಡಿಸುವುದು.

ಶ್ರೀ ಕೆ. ಎಂ. ಶಿವಲಿಂಗೇಗೌಡ.: ಮಂಡಿಸಿ. ಮಂಡಿಸಿಯಾದ ಮೇಲೆ ನಮ್ಮದು ಒಂದು ಚೂರು ಕೇಳಿ.

ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ನೀಡಲಾದ ಉತ್ತರಗಳು

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು):– ದಿನಾಂಕ 05–12–2011ರ 1ನೇ ಪಟ್ಟಿಯಿಂದ ಲಿಖಿತ ಮೂಲಕ ಉತ್ತರಿಸುವ 61 ಪ್ರಶ್ನೆಗಳ ಪೈಕಿ 50 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಮಂಡಿಸಲಾಯಿತು. (ಅನುಬಂಧ–1)

5. ಪ್ರಕಟಣೆ

ಅಧ್ಯಕ್ಷರು: ತೇರದಾಳ ವಿಧಾನಸಭಾ ಕ್ಷೇತ್ರದ ಸದಸ್ಯರಾದ ಶ್ರೀ ಸಿದ್ದುಸವದಿ ಅವರನ್ನು ವಿಧಾನ ಸಭೆಯಲ್ಲಿ ಸರ್ಕಾರಿ ಮುಖ್ಯ ಸಚೇತಕರನ್ನಾಗಿ ನೇಮಕ ಮಾಡಲಾಗಿದೆ ಎಂದು ಮಾನ್ಯ ಮುಖ್ಯಮಂತ್ರಿಯವರು ಪತ್ರ ಮುಖೇನ ತಿಳಿಸಿರುತ್ತಾರೆಂದು ಈ ಮೂಲಕ ಪ್ರಕಟಿಸಲಾಗಿದೆ.

6. ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯ

ವಿಷಯ: ಶಾಸಕರ ಹಕ್ಕು ಚ್ಯುತಿ ಮಾಡಿರುವ ಅಧಿಕಾರಿ ಮೇಲೆ ಕ್ರಮ ತೆಗೆದುಕೊಳ್ಳುವ ಬಗ್ಗೆ:–

ಶ್ರೀ ಕೆ. ಎಂ. ಶಿವಲಿಂಗೇಗೌಡ (ಅರಸೀಕರೆ):– ಮಾನ್ಯ ಅಧ್ಯಕ್ಷರೆ, ಈ ಸರ್ಕಾರದಲ್ಲಿ ಮತ್ತು ತಮ್ಮಲ್ಲಿ ಈ ವಿಚಾರದಲ್ಲಿ ಹೆಚ್ಚಿಗೆ ಹೇಳುವುದಿಲ್ಲ. ನಮ್ಮ ಘನತೆ ಗೌರವಕ್ಕೆ ಕುಂದಾದಾಗ, ನಮ್ಮ ಹಕ್ಕುಚ್ಯುತಿ ಆದಂತಹ ಸಂದರ್ಭದಲ್ಲಿ ನಮ್ಮನ್ನು ಕಾಪಾಡುವುದಕ್ಕೆ ನೀವು ಅಧ್ಯಕ್ಷರಿರಬೇಕು. ಅದರ ಜೊತೆಗೆ ಸರ್ಕಾರವೂ ಸಹಾಯ ಮಡಬೇಕು. ನಾನು ಆಗಲೇ ನಿಮಗೆ ಪೂರ್ಣ ಪ್ರಮಾಣದ ಮಾಹಿತಿಯನ್ನು ಕೊಟ್ಟಿದ್ದೇನೆ. ಆದರೆ, ಬಹಳ ಪತ್ರಿಕೆಯಲ್ಲಿ ಬಂದಿದೆ. ಅದು ಬಹಳ ಜನಕ್ಕೆ ಗೊತ್ತಿಲ್ಲ. ಬಸವೇಶ್ವರ ಜಯಂತಿಯ ಪೂರ್ವಭಾವಿಯ ಸಭೆಗೆ ತಹಶೀಲ್ದಾರರು ನನ್ನನ್ನು ಕರೆದಾಗ, ನಾನು ಆ ಸಭೆಗೆ ಹೋದಂತಹ ಸಂದರ್ಭದಲ್ಲಿ ಒಂದೇ ಒಂದು